Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

29.10.2025 2.30 pm

<><*<><>*><>

<u>ಮುಖ್ಯಾಂಶಗಳು</u>

- ಕಾಗಿನೆಲೆ ಅಭಿವೃದ್ಧಿ ಕುರಿತಂತೆ ೩೪ ಕೋಟಿ ರೂಪಾಯಿ ಮೊತ್ತದ ಕ್ರಿಯಾ ಯೋಜನೆಗೆ ಮುಖ್ಯಮಂತ್ರಿ ಮಂಜೂರಾತಿ
- ರಾಜ್ಯದಿಂದ ಒಂದೇ ಒಂದು ಕೈಗಾರಿಕೆಯೂ ಹೊರ ಹೋಗಿಲ್ಲ: ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಸ್ಪಷ್ಟನೆ
- ಬೆಂಗಳೂರಿನ ಕ್ವಾಂಟಮ್ ಸಿಟಿ ಸಹಭಾಗಿತ್ವಕ್ಕೆ ಸ್ವಿಟ್ಜರ್ಲೆಂಡ್ ಕಂಪನಿಗಳ ಒಲವು - ಸಚಿವ ಎನ್.ಎಸ್.ಭೋಸರಾಜ್
- ಆರ್‌ಎಸ್‌ಎಸ್ ಗೆ ಕಡಿವಾಣ ಹಾಕುವ ವ್ಯರ್ಥ ಪ್ರಯತ್ನ ಕೈಬಿಡುವಂತೆ ಸರ್ಕಾರಕ್ಕೆ ಬಿಜೆಪಿ ಸಲಹೆ

***************

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರದ ೧೩ನೇ ಸಭೆಯಲ್ಲಿ ಒಟ್ಟು ೩೪ ಕೋಟಿ ರೂಪಾಯಿ ಮೊತ್ತದ ಕ್ರಿಯಾ ಯೋಜನೆಗೆ ಮಂಜೂರಾತಿ ದೊರೆತಿದೆ. ಕಾಗಿನೆಲೆಯಲ್ಲಿ ಪ್ರತಿ ವರ್ಷ ಕನಕ ಉತ್ಸವ ಆಚರಿಸಲು ಕ್ರಮ ಕೈಗೊಳ್ಳುವುದರ ಜೊತೆಗೆ ಉತ್ಸವ ಸಂದರ್ಭದಲ್ಲಿ ಜಿಲ್ಲೆಯ ದಾರ್ಶನಿಕರ ಜೀವನಾದರ್ಶಗಳನ್ನು ಪ್ರತಿಬಿಂಬಿಸುವ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದ್ದಾರೆ. ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ ಹಾಗೂ ಕನಕ ಅಧ್ಯಯನ ಪೀಠದ ಸಮನ್ವಯದಿಂದ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ. ಜೊತೆಗೆ ಪ್ರಾಧಿಕಾರದ ಆದಾಯ ಹೆಚ್ಚಳಕ್ಕೆ ಯೋಜನೆಗಳನ್ನು ರೂಪಿಸಬೇಕು ಎಂದು ಸಲಹೆ ನೀಡಿದ್ದಾರೆ. ಹಾವೇರಿ ಜಿಲ್ಲೆಯ ಬ್ಯಾಡಗಿ ತಾಲೂಕಿನ ಕನಕದಾಸರ ಕರ್ಮಭೂಮಿ ಕಾಗಿನೆಲೆ ಮತ್ತು ಜನ್ಮಭೂಮಿ ಸ್ಥಳವಾದ ಬಾಡ ಗ್ರಾಮ ಹಾಗೂ ಸುತ್ತಮುತ್ತಲಿನ ಪರಂಪರೆಯ ತಾಣಗಳನ್ನು ಪ್ರವಾಸಿ ಕೇಂದ್ರವಾಗಿ ಅಭಿವೃದ್ಧಿಗೊಳಿಸುವ ಬಗ್ಗೆ ಹಾಗೂ ವಿವಿಧ ಯೋಜನೆಗಳ ಕ್ರಿಯಾ ಯೋಜನೆಗೂ ಅನುಮೋದನೆ ನೀಡಲಾಗಿದೆ. ಕಾಗಿನೆಲೆ ಗ್ರಾಮದ ವ್ಯಾಪ್ತಿಯಲ್ಲಿ ಇತರ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವ ಕುರಿತಂತೆ ಸಭೆಯಲ್ಲಿ ಚರ್ಚಿಸಲಾಯಿತು.

***************

ರಾಜ್ಯದಲ್ಲಿ ಕೈಗಾರಿಕೆಗಳ ಬೆಳವಣಿಗೆಗೆ ಅತ್ಯಗತ್ಯವಾದ ಪರಿಸರವಿದ್ದು, ಅತ್ಯುತ್ತಮ ಪ್ರತಿಭಾ ಸಂಪನ್ಮೂಲವಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ. ಬಿ. ಪಾಟೀಲ್ ತಿಳಿಸಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಕೈಗಾರಿಕಾ ನೀತಿಗಳು ಉತ್ತಮವಾಗಿದ್ದು, ಈ ವಿಚಾರವಾಗಿ ಹಬ್ಬಿಸುತ್ತಿರುವ ತಪ್ಪು ಕಲ್ಪನೆಯಿಂದ ಹೊರಬರಬೇಕಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಶೇಕಡಾ ೬೦ಕ್ಕಿಂತ ಹೆಚ್ಚು ಬಂಡವಾಳ ಹರಿದು ಬಂದಿದೆ. ಹೂಡಿಕೆಗಳಿಂದ ಸಾವಿರಾರು ಸಂಖ್ಯೆಯಲ್ಲಿ ಉದ್ಯೋಗಗಳೂ ಸೃಷ್ಟಿಯಾಗುತ್ತಿವೆ ಎಂದು ತಿಳಿಸಿದ್ದಾರೆ. ಫಾಕ್ಸ್ ಕಾನ್ ನಂತಹ ದೈತ್ಯ ಕಂಪನಿಯು ತೈವಾನ್ ನಂತರ ಬೃಹತ್ ಘಟಕವನ್ನು ರಾಜ್ಯದಲ್ಲಿ ಆರಂಭಿಸಿದ್ದು, ಇಲ್ಲಿಂದ ದುಬಾರಿ ಮೊಬೈಲ್ ಫೋನುಗಳು ರಫ್ತಾಗುತ್ತಿವೆ ಎಂದು ಹೇಳಿದ್ದಾರೆ. ಇದೇ ವೇಳೆ ಕೇಂದ್ರ ಸರಕಾರದ ತಾರತಮ್ಯ ನೀತಿಯ ವಿರುದ್ಧ ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

***************

ಬೆಂಗಳೂರು ನಗರದಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿರುವ ಕ್ವಾಂಟಮ್ ಸಿಟಿ ಅಭಿವೃದ್ಧಿ ಹಾಗೂ ಸಹಭಾಗಿತ್ವಕ್ಕೆ ಸ್ವಿಟ್ಜರ್ಲೆಂಡ್ ಕಂಪನಿಗಳು ಹಾಗೂ ಸಂಶೋಧನಾ ಸಂಸ್ಥೆಗಳ ಒಲವು ತೋರಿವೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್ ಎಸ್ ಭೋಸರಾಜು ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ವಿಟ್ಜರ್ಲೆಂಡ್ ಪ್ರವಾಸದ ಬಗ್ಗೆ ಮಾಹಿತಿ ಹಂಚಿಕೊಂಡಿದ್ದಾರೆ. ಕ್ವಾಂಟಮ್ ಸಂಶೋಧನೆಯಲ್ಲಿ ತೊಡಗಿಕೊಂಡಿರುವ ವಿಶ್ವದ ಪ್ರಮುಖ ಸಂಸ್ಥೆಗಳಾದ ಇಟಿಹೆಚ್ ಜ್ಯೂರಿಚ್, ಸೆರಿ ಸೇರಿದಂತೆ ವಿವಿಧ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಚರ್ಚಿಸಲಾಗಿದೆ. ರಾಜ್ಯದಲ್ಲಿ ಕ್ವಾಂಟಮ್ ಪರಿಣಿತ ಮಾನವ ಸಂಪನ್ಮೂಲ ಅಭಿವೃದ್ಧಿಗಾಗಿ ಐಐಎಸ್‌ಸಿ ಜೊತೆಗೂಡಿ ಕೋರ್ಸ್‌ಗಳನ್ನು ಪ್ರಾರಂಭಿಸಲಾಗಿದೆ ಎಂದು ಹೇಳಿದ್ದಾರೆ. ಸರ್ಕಾರ ಬೆಂಗಳೂರು ನಗರವನ್ನು ವಿಶ್ವದ ಕ್ವಾಂಟಮ್ ಕ್ಷೇತ್ರದ ಕೇಂದ್ರ ಬಿಂದುವನ್ನಾಗಿಸುವ ನಿಟ್ಟಿನಲ್ಲಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಬೆಂಗಳೂರಿನಲ್ಲಿ ನಡೆದ ದೇಶದ ಮೊದಲ ಕ್ವಾಂಟಮ್ ಸಮಾವೇಶದಲ್ಲಿ ಘೋಷಿಸಿದಂತೆ ಈಗಾಗಲೇ ಕ್ವಾಂಟಮ್ ಸಿಟಿಗೆ ಭೂಮಿಯನ್ನು ಸರ್ಕಾರ ಮಂಜೂರು ಮಾಡಿದೆ ಎಂದು ಮಾಹಿತಿ ನೀಡಿದ್ದಾರೆ.

***************

ಆರ್‌ಎಸ್‌ಎಸ್ ಪಥ ಸಂಚಲನಕ್ಕೆ ಅವಕಾಶ ನೀಡದಿರುವ ಸರ್ಕಾರದ ನಡೆಗೆ ನ್ಯಾಯಾಲಯವೇ ಆಕ್ಷೇಪ ವ್ಯಕ್ತಪಡಿಸಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಅವರು, ಸರ್ಕಾರದ ಹಿಟ್ಲರ್ ಆಟ ಜಾಸ್ತಿ ದಿನ

ನಡೆಯುವುದಿಲ್ಲ. ಹಿಂಬಾಗಿಲಿನಿಂದ ಆರ್‌ಎಸ್‌ಎಸ್‌ಗೆ ಕಡಿವಾಣ ಹಾಕುವ ವ್ಯರ್ಥ ಪ್ರಯತ್ನ ಬಿಡುವಂತೆ ವ್ಯಂಗ್ಯವಾಡಿದ್ದಾರೆ. ಸಂವಿಧಾನ ಪುಸ್ತಕದಲ್ಲಿ ನಾಗರಿಕರ ಮೂಲಭೂತ ಹಕ್ಕುಗಳಿಗೆ ಸ್ಥಾನ ಇಲ್ಲವೇ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ಪ್ರಶ್ನಿಸಿದ್ದಾರೆ.

***************

ರಾಜ್ಯದಲ್ಲಿ ಪೊಲೀಸ್ ಆಡಳಿತ ತರಲು ರಾಜ್ಯ ಸರ್ಕಾರ ಪ್ರಯತ್ನಿಸುತ್ತಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ. ಹಾವೇರಿಯಲ್ಲಿ ಮಾತನಾಡಿದ ಅವರು, ಆರ್‌ಎಸ್‌ಎಸ್ ವಿರುದ್ಧ ರಾಜ್ಯ ಸರ್ಕಾರ ನೀಡಿದ್ದ ಆದೇಶ ಸಂವಿಧಾನ ಬಾಹಿರವಾಗಿದ್ದು, ಹೈಕೋರ್ಟ್‌ನ ಧಾರವಾಡ ಪೀಠ ಮಧ್ಯಂತರ ತಡೆ ನೀಡಿದೆ. ಜನರ ವಾಕ್ ಸ್ವಾತಂತ್ರ್ಯ ನಾಗರಿಕರ ಹಕ್ಕು ಮೊಟಕುಗೊಳಿಸಲು ಸರ್ಕಾರ ಪಯತ್ನಿಸುತ್ತಿದೆ ಎಂದು ಆರೋಪಿಸಿದ್ದಾರೆ. ಸಿದ್ದರಾಮಯ್ಯ ಅವರಿಂದ ಜನರು ಈ ರೀತಿಯ ಆಡಳಿತ ನಿರೀಕ್ಷೆ ಮಾಡಿರಲಿಲ್ಲ ಎಂದು ತಿಳಿಸಿದ್ದಾರೆ.

***************

ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ. ವೀರಪ್ಪ ಅವರು ಇಂದು ಕೊಪ್ಪಳ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ಕೊಪ್ಪಳ ನಗರದಲ್ಲಿನ ಜಿಲ್ಲಾ ಆಸ್ಪತ್ರೆ, ಉಪನೊಂದಣಿ ಕಚೇರಿ. ತಹಶಿಲ್ದಾರರ ಕಚೇರಿ ಕೊಪ್ಪಳ ನಗರ ಸಭೆ ಮತ್ತು ಕೇಂದ್ರಿಯ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ ಪರಿಶೀಲಿಸಿ ಜನರ ಸಮಸ್ಯೆಗಳು ಮತ್ತು ಅವರಿಗೆ ಸಿಗಬೇಕಾದ ಸೌಲಭ್ಯಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದಿದ್ದಾರೆ.

***************

ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಕಾನೂನು ಶಾಲೆಯಲ್ಲಿ "ಪ್ರಾಚೀನ ಭಾರತೀಯ ನ್ಯಾಯಶಾಸ್ತ್ರ ಮತ್ತು ಅದರ ಸಮಕಾಲೀನ ಪ್ರಸ್ತುತತೆ' ವಿಷಯಕ್ಕೆ ಸಂಬಂಧಿಸಿದಂತೆ, ಒಂದು ದಿನದ ಕಾರ್ಯಗಾರ ಹಮ್ಮಿಕೊಳ್ಳಲಾಗಿತ್ತು. ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಧೀಶ ಪಿ. ಕೃಷ್ಣ ಭಟ್ ಸಸಿಗೆ ನೀರುಣಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಭಾರತದ ಪ್ರಾಚೀನ ನ್ಯಾಯ ಶಾಸ್ತ್ರದ ಬೆಳವಣಿಗೆಗೆ ಒಬ್ಬ ಕನ್ನಡಿಗ ವಿದ್ವಾಂಸನಾದ ವಿಜ್ಞಾನೇಶ್ವರನ ಕೊಡುಗೆ ಅಪಾರವಾದದ್ದು ಎಂದು ಸ್ಮರಿಸಿದರು. ಅನಾದಿ ಕಾಲದಿಂದಲೂ ದೇಶದ ನ್ಯಾಯ ವ್ಯವಸ್ಥೆಗೆ ಧರ್ಮವೇ ಮೂಲ ಅಡಿಪಾಯ. ಧರ್ಮವಿಲ್ಲದೇ ನ್ಯಾಯವಿಲ್ಲ, ನ್ಯಾಯವಿಲ್ಲದೇ ಧರ್ಮವಿಲ್ಲ ಎನ್ನುವ ನಿಟ್ಟಿನಲ್ಲಿ ನಮ್ಮ ಪ್ರಾಚೀನ ನ್ಯಾಯ ಶಾಸ್ತ್ರಜ್ಞರು ಗ್ರಂಥ ಹಾಗೂ ಸ್ಮೃತಿಗಳಲ್ಲಿ ಉಲ್ಲೇಖಿಸಿದ್ದಾರೆ ಎಂದು ಅಭಿಪ್ರಾಯಪಟ್ಟಿದ್ದಾರೆ.

***************

ಬೆಂಗಳೂರು ಉತ್ತರ ವಿಶ್ವವಿದ್ಯಾಲಯವು ಸ್ನಾತಕ ಪದವಿಗಳಲ್ಲಿ ೨೦೧೮-೧೯ ಹಾಗೂ ೨೦೨೦ರ ಅವಧಿಯಲ್ಲಿ ಸಿಬಿಸಿಎಸ್ ಕೋರ್ಸುಗಳಲ್ಲಿ ವ್ಯಾಸಂಗ ಮಾಡಿ ಅನುತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ಮತ್ತೊಮ್ಮೆ ಪರೀಕ್ಷೆ ಬರೆಯಲು ಅವಕಾಶ ನೀಡಲಾಗಿದೆ ಎಂದು ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವ ಪ್ರೊ.ಎನ್.ಲೋಕನಾಥ್ ತಿಳಿಸಿದ್ದಾರೆ. ದಂಡವಿಲ್ಲದೇ ಶುಲ್ಕ ಪಾವತಿಸಲು ನವೆಂಬರ್ ೧೫ ಕೊನೆ ದಿನವಾಗಿದೆ. ಸಿಬಿಸಿಎಸ್ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡಿ ಅನುತ್ತೀರ್ಣಗೊಂಡ ವಿದ್ಯಾರ್ಥಿಗಳ ಮನವಿ ಮೇರೆಗೆ ವಿಶ್ವವಿದ್ಯಾಲಯದ ಸಿಂಡಿಕೇಟ್ ಅನುಮೋದನೆ ಹಾಗೂ ಕುಲಪತಿ ಅನುಮತಿ ಮೇರೆಗೆ ಈ ಅವಕಾಶ ಕಲ್ಪಿಸಲಾಗಿದೆ.

***************

ವಿದ್ಯಾರ್ಥಿಗಳು ಪಾಠ ಮತ್ತು ಕೌಶಲ್ಯಗಳ ಜೊತೆಗೆ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಪಾಲ್ಗೊಂಡರೆ ವಿದ್ಯಾರ್ಥಿಗಳಲ್ಲಿರುವ ಪ್ರತಿಭೆಗಳು ಹೊರ ಹೊಮ್ಮುವುದಕ್ಕೆ ಸಹಾಯವಾಗಲಿದೆ ಎಂದು ಕೊಪ್ಪಳದ ಅಪರ ಜಿಲ್ಲಾಧಿಕಾರಿ ಸಿದ್ದರಾಮೇಶ್ವರ ತಿಳಿಸಿದ್ದಾರೆ. ನಗರದ ಸರಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜಿನಲ್ಲಿ  ೨೦೨೫-೨೬ನೇ ಸಾಲಿನ ಯುವಸೌರಭ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು. ವಿದ್ಯಾರ್ಥಿಗಳು ಪಾಠದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಬೇಕು ಎಂದು ಹೇಳಿದ್ದಾರೆ. ಕಾರ್ಯಕ್ರಮ ಉದ್ಘಾಟಿಸಿದ ಸಾಹಿತಿ ಅಲ್ಲಮಪ್ರಭು ಬೆಟ್ಟದೂರು  ವಿದ್ಯಾರ್ಥಿಗಳು ಸಾಂಸ್ಕೃತಿಕ ಹವ್ಯಾಸವನ್ನು, ಸಂಸ್ಕೃತಿಯ ಸೌಜನ್ಯವನ್ನು ಮತ್ತು ಮಾನವೀಯತೆಯನ್ನು ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದ್ದಾರೆ.

***************

ಹಾವೇರಿ ಜಿಲ್ಲೆಯ ಎಲ್ಲ ನ್ಯಾಯಾಲಯಗಳಲ್ಲಿ ಡಿಸೆಂಬರ್ ೨೩ರಂದು ರಾಷ್ಟ್ರೀಯ ಲೋಕ ಅದಾಲತ್ ಜರುಗಲಿದೆ ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯೂ ಆಗಿರುವ ನ್ಯಾಯಾಧೀಶೆ ಶ್ರೀಶೈಲಜಾ ಎಚ್.ವಿ. ತಿಳಿಸಿದ್ದಾರೆ. ಅರ್ಹ ಕಕ್ಷಿದಾರರು ಅದಾಲತ್ ಸದುಪಯೋಗಪಡಿಸಿಕೊಳ್ಳಬೇಕು.

***************

ಕಾರವಾರದಲ್ಲಿ ಪಿಂಚಣಿ ಅದಾಲತ್ ಕಾರ್ಯಕ್ರಮ ನಡೆಯಲಿದ್ದು, ಈ ಅದಾಲತ್ ನಲ್ಲಿ ಪಿಂಚಣಿದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳುವಂತೆ ಉತ್ತರಕನ್ನಡ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ ತಿಳಿಸಿದ್ದಾರೆ. ಕಾರವಾರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಾಗೃತಿ ಅರಿವು

ಸಪ್ತಾಹ ಮತ್ತು ರಾಷ್ಟ್ರವ್ಯಾಪಿ ಡಿಜಿಟಲ್ ಲೈಫ್ ಸರ್ಟಿಫಿಕೇಟ್ ಅಭಿಯಾನ ೪.೦ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

***************

ಮೋಂಥಾ ಚಂಡಮಾರುತದ ಪ್ರಭಾವದಿಂದ ಆಂಧ್ರಪ್ರದೇಶ, ತೆಲಂಗಾಣ, ಒಡಿಶಾ, ತಮಿಳುನಾಡು, ಕೇರಳ ಮತ್ತು ರಾಜ್ಯದಲ್ಲಿ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇಂದು ಉತ್ತರ ಒಳನಾಡು ಜಿಲ್ಲೆಗಳಾದ ಬಾಗಲಕೋಟೆ, ಬೆಳಗಾವಿ, ಬೀದರ್, ಧಾರಾವಾಡ, ಗದಗ, ಯಾದಗಿರಿ ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ.

***************